ಕನ್ನಡ ಸಾಹಿತ್ಯ ಪರಿಷತ್ತಿನ ೨೦೨೩ನೆಯ ಸಾಲಿನ ವಿವಿಧ ಪುಸ್ತಕ ದತ್ತಿ ಪ್ರಶಸ್ತಿಯ ಕೊನೆಯ ದಿನಾಂಕ ಜೂನ್ 15ಕ್ಕೆ ವಿಸ್ತರಣೆ

ಬೆಂಗಳೂರು : ಕನ್ನಡ ಸಾಹಿತ್ಯ ಪರಿಷತ್ತು 2023ನೆಯ ಸಾಲಿನಲ್ಲಿ ಪುಸ್ತಕಗಳಿಗೆ ನೀಡಲಾಗುವ ವಿವಿಧ ದತ್ತಿ ಪುರಸ್ಕಾರಗಳಿಗಾಗಿ ಪುಸ್ತಕಗಳನ್ನು ಆಹ್ವಾನಿಸಿತ್ತು, 2023ರ ಜನವರಿ 1 ರಿಂದ ಡಿಸೆಂಬರ್ 31ರೊಳಗೆ ಪ್ರಕಟಗೊಂಡ ಪುಸ್ತಕಗಳನ್ನು ಲೇಖಕರು ಅಥವಾ ಪ್ರಕಾಶಕರು ಕಳಿಸಿಕೊಡಬಹುದಾಗಿದೆ ಎಂದು ಈ ಹಿಂದಿನ ಪತ್ರಿಕಾ ಪ್ರಕಟಣೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ.ಮಹೇಶ ಜೋಶಿಯವರು ತಿಳಿಸಿ ಮೇ 31 ಕೊನೆ ದಿನವೆಂದು ತಿಳಿಸಿದ್ದರು. ನಾಡಿನೆಲ್ಲೆಡೆಯಿಂದ ಸಾಹಿತ್ಯಾಸಕ್ತರು, ಬರಹಗಾರರು ಕೊನೆಯ ದಿನವನ್ನು ವಿಸ್ತರಿಸುವಂತೆ ಕೋರಿಕೊಂಡಿದ್ದರ ಹಿನ್ನೆಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಉದ್ದೇಶವೇ ಎಲ್ಲರನ್ನೂ ಒಳಗೊಳ್ಳುವುದು ಎನ್ನುವ ಅಂಶವನ್ನು ಗಮನದಲ್ಲಿರಿಸಿ ಎಲ್ಲರಿಗೂ ಪುಸ್ತಕಗಳನ್ನು ಕಳುಹಿಸಿ ಸ್ಪರ್ಧೆಯಲ್ಲಿ ಭಾಗವಹಿಸುವ ಅವಕಾಶ ಕಲ್ಪಿಸುವ ಉದ್ದೇಶದಿಂದ ಕೊನೆಯ ದಿನವನ್ನು ಜೂನ್ 15ರವರೆಗೆ ವಿಸ್ತರಿಸಲಾಗಿದೆ. ಸಾಹಿತ್ಯಾಸಕ್ತರು ಇದರ ಸದುಪಯೋಗ ಪಡೆದು ಕೊಳ್ಳ ಬೇಕೆಂದು ನಾಡೋಜ ಡಾ.ಮಹೇಶ ಜೋಶಿಯವರು ತಿಳಿಸಿದ್ದಾರೆ.

೨೦೨೩ನೆಯ ಸಾಲಿನಲ್ಲಿ ಪ್ರಕಟಗೊಂಡಿರುವ ಒಟ್ಟು 53 ವಿವಿಧ ಪುಸ್ತಕಗಳ ದತ್ತಿ ಪ್ರಶಸ್ತಿಯನ್ನು ಕನ್ನಡ ಸಾಹಿತ್ಯ ಪರಿಷತ್ತು ನೀಡುತ್ತಿದೆ. ಅದಕ್ಕಾಗಿ ಅನೇಕ ದತ್ತಿ ದಾನಿಗಳು ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ದತ್ತಿ ನಿಧಿಯನ್ನು ಸ್ಥಾಪಿಸಿದ್ದು ಒಟ್ಟಾರೆ 57ವಿವಿಧ ಪ್ರಕಾರಗಳ ಪುಸ್ತಕಗಳನ್ನು ಆಹ್ವಾನಿಸಲಾಗಿದೆ. ಪ್ರತಿ ದತ್ತಿ ಪ್ರಶಸ್ತಿಯ ಪ್ರವೇಶಕ್ಕೆ ತಲಾ ಮೂರು ಪುಸ್ತಕಗಳನ್ನು, ಯಾವ ದತ್ತಿಗಾಗಿ ಎನ್ನುವುದನ್ನು ಪುಸ್ತಕದ ಮೊದಲ ಪುಟದಲ್ಲಿ ಸ್ಪಷ್ಟವಾಗಿ ಬರೆದು 'ಗೌರವ ಕಾರ್ಯದರ್ಶಿಗಳು, ಕನ್ನಡ ಸಾಹಿತ್ಯ ಪರಿಷತ್ತು, ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ ಬೆಂಗಳೂರು-560 018' ಅವರಿಗೆ ಕಳುಹಿಸಲು ಪ್ರಕಟಣೆಯಲ್ಲಿ ಕೋರಿದೆ. ಉಳಿದ ನಿಯಮಗಳೆಲ್ಲವೂ ಈ ಹಿಂದೆ ತಿಳಿಸಿದಂತೆಯೇ ಇರುತ್ತವೆ.

ಪ್ರತಿ ಪುಸ್ತಕ ದತ್ತಿ ಪ್ರಶಸ್ತಿಗಳಿಗೂ ತಲಾ ಮೂರು ಪ್ರತಿಗಳನ್ನು ಕಳುಹಿಸಬೇಕು., ಪುಸ್ತಕ ದತ್ತಿ ಪ್ರಶಸ್ತಿಗೆ ಪುಸ್ತಕಗಳನ್ನು ಕಳುಹಿಸುವವರು ಸಮಗ್ರ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯತ್ವವನ್ನು ಹೊಂದಿರಬೇಕು. ಪುಸ್ತಕ ಕಳುಹಿಸುವಾಗ ತಮ್ಮ ಸದಸ್ಯತ್ವ ಸಂಖ್ಯೆಯನ್ನು ನಮೂದಿಸಿ ಕಳುಹಿಸಬೇಕು. ಒಂದು ವೇಳೆ ಇನ್ನೂ ಸದಸ್ಯರಾಗಿರದಿದ್ದಲ್ಲಿ ಪರಿಷತ್ತಿನ ಆಜೀವ ಸದಸ್ಯತ್ವವನ್ನು ಪಡೆದುಕೊಂಡು ವಿವರಗಳೊಂದಿಗೆ ಅರ್ಜಿ ಸಲ್ಲಿಸ ಬಹುದು. ದತ್ತಿಯ ವಿವರಗಳಿಗಾಗಿ ಐದು ರೂಪಾಯಿಯ ಅಂಚೆಚೀಟಿಯನ್ನು ಲಗತ್ತಿಸಿದ ಕವರ್ ಅನ್ನು ಕನ್ನಡ ಸಾಹಿತ್ಯ ಪರಿಷತ್ತಿಗೆ ಕಳುಹಿಸಿ ವಿವರಗಳನ್ನು ಪಡೆಯ ಬಹುದು ಇಲ್ಲದಿದ್ದರೆ ಕನ್ನಡ ಸಾಹಿತ್ಯ ಪರಿಷತ್ತಿನ ಅಂತರ್ಜಾಲ ತಾಣಗಳಾದ

ಫೇಸ್ ಬುಕ್ : https://www.facebook.com/kasapaofficial,

https://www.facebook.com/KannadaSahityaParishattu

ಟ್ವಿಟರ್ : https://twitter.com/kannadaparishat

ಕೂ ಆಪ್ : https://www.kooapp.com/profile/kasapa

ಇನ್ ಸ್ಟಾಗ್ರಾಮ್ : https://www.instagram.com/kannadasahityaparishattu

ವೆಬ್ ಸೈಟ್ : https://kannadasahithyaparishattu.in

www.kasapa.in ಅಥವಾ ದೂರವಾಣಿ ಸಂಖ್ಯೆ 080-26612991/26623584 ಇವುಗಳ ಮೂಲಕವೂ ಮಾಹಿತಿಯನ್ನು ಪಡೆಯ ಬಹುದಾಗಿದೆ ಎಂದು ನಾಡೋಜ ಡಾ.ಮಹೇಶ ಜೋಶಿಯವರು ತಿಳಿಸಿ ವಿಸ್ತರಿಸಿದ ಕೊನೆಯ ದಿನಾಂಕ ಜೂನ್ 15ರೊಳಗೆ ಸಾಧ್ಯವಾದಷ್ಟು ಹೆಚ್ಚಿನ ಬರಹಗಾರರು ತಮ್ಮ ಪುಸ್ತಕಗಳನ್ನು ಕಳುಹಿಸಿ ಕೊಡ ಬೇಕಾಗಿ ವಿನಂತಿಸಿ ಕೊಂಡಿದ್ದಾರೆ.

ಎನ್.ಎಸ್.ಶ್ರೀಧರ ಮೂರ್ತಿ

ಸಂಚಾಲಕರು, ಪ್ರಕಟಣಾ ವಿಭಾಗ, ಕನ್ನಡ ಸಾಹಿತ್ಯ ಪರಿಷತ್ತು